# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 384(537)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 19-02-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು; | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಈ ಕೆಳಕಂಡಂತಿದೆ- |
| ಆ) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1996-97ನೇ ಸಾಲಿನಲ್ಲಿ ಉಪನ್ಯಾಸಕರಾಗಿ ನೇಮಕಗೊಂಡು, ಸುಮಾರು 27 ವರ್ಷಗಳ ಕಾಲ ಸುದೀರ್ಘವಾಗಿ ಸೇವೆ ಸಲ್ಲಿಸಿದ್ದರೂ ಇದುವರೆವಿಗೂ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ನೀಡಲಾಗುತ್ತಿದೆ.<br><br>ಅದರಂತೆ, ಶಾಲಾ ಶಿಕ್ಷಣ ಇಲಾಖೆಯಲ್ಲಿ (ಪದವಿ ಪೂರ್ವ) ಬಡ್ತಿ ಕೋಟಾದಲ್ಲಿ ಕಾಲ ಕಾಲಕ್ಕೆ ಲಭ್ಯವಾಗುವ ರಿಕ್ತ ಸ್ಥಾನಗಳಿಗೆ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಪ್ರಾಂಶುಪಾಲರ ಹುದ್ದೆಗೆ ಅವರ ಜೇಷ್ಠತೆಯ ಮತ್ತು ಅರ್ಹತೆ ಅನುಸಾರ ಸ್ಥಾನಪನ್ನ ಬಡ್ತಿ ನೀಡಲಾಗಿದ್ದು, ವಿವರಗಳು ಈ ಕೆಳಗಿನಂತಿದೆ- |

| ಕೋಟಾ | DR | PR |
|---|---|---|
| ಕಲ್ಯಾಣ ಕರ್ನಾಟಕ ವೃಂದ (ಪ್ರಾದೇಶಿಕ ಕಚೇರಿ & ರಾಜ್ಯ ಮಟ್ಟದ ಕಚೇರಿ (ಬಿಬಿಎಂಪಿ ವ್ಯಾಪ್ತಿ) ಒಳಗೊಂಡಂತೆ) | 40 | 37 |
| ಉಳಿದ ವೃಂದ | 266 | 182 |
| ಒಟ್ಟು | 306 | 219 |

| ಕ್ರಮ ಸಂಖ್ಯೆ | ವರ್ಷ | ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲಾದ ಸಂಖ್ಯೆಗಳ ವಿವರ | ಉಪನ್ಯಾಸಕರು ನೇಮಕಗೊಂಡ ವರ್ಷ |
|---|---|---|---|
| 1 | 2016 | 135 | 1993-94<br>1994-95 |
| 2 | 2018 | 224 | |
| 3 | 2019 | 95 | |
| 4 | 2020 | 306 | |
| 5 | 2021 | 145 | 1996-1997 |
| ಒಟ್ಟು | | 905 | |

| | | |
|---|---|---|
| ಇ) | ಬಂದಿದ್ದಲ್ಲಿ, ಇದುವರೆವಿಗೆ ಬಡ್ತಿ ನೀಡದೆ ಇರಲು ಕಾರಣಗಳೇನು; (ವಿವರ ನೀಡುವುದು) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡುವಾಗ ಮೀಸಲಾತಿಯನ್ನು ಪಾಲಿಸಲಾಗಿಲ್ಲವೆಂಬ ದೂರಿನ ಕುರಿತಂತೆ ತನಿಖೆ ನಡೆಸಲು ಸಮಾಜ ಕಲ್ಯಾಣ ಇಲಾಖೆಯು ತನಿಖಾ ತಂಡವನ್ನು ರಚಿಸಿದ್ದು, ಸದರಿ ತನಿಖಾ ತಂಡವು ತನಿಖೆ ನಡೆಸಿ ವರದಿ ನೀಡಲು ಉಪನ್ಯಾಸಕ ವೃಂದದ ನೇರ ನೇಮಕಾತಿ ಆದೇಶಗಳು ಹಾಗೂ ಪ್ರಾಂಶುಪಾಲರ ವೃಂದದ ಮುಂಬಡ್ತಿ ಆದೇಶಕ್ಕೆ ಸಂಬಂಧಿಸಿದ ಇಲಾಖಾ ಮುಂಬಡ್ತಿ ಸಭಾ ನಡವಳಿಯನ್ನು ಒದಗಿಸುವಂತೆ ಕೋರಿದ್ದರು. ಈ ಕುರಿತು ಸಮಾಜ ಕಲ್ಯಾಣ ಇಲಾಖೆಯ ತನಿಖಾ ತಂಡವು ದಿನಾಂಕ:12.12.2019 ರಿಂದ 17.12.2019ರವರಗೆ ದಾಖಲೆಗಳನ್ನು ಪರಿಶೀಲನೆ ನಡೆಸಿ, ತನಿಖೆಯನ್ನು ಕೈಗೊಂಡಿರುತ್ತದೆ.<br><br>ಏತನ್ಮಧ್ಯೆ, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರು ದಿನಾಂಕ:14–10–2022ರ ಪತ್ರದಲ್ಲಿ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಿರುವ ದಿನಾಂಕ:31–10–2016 ರಿಂದ 2022ರವರೆಗೆ ನೀಡಿರುವ ಮುಂಬಡ್ತಿ ಆದೇಶದ ನಡವಳಿಗಳನ್ನು ಸಲ್ಲಿಸುವಂತೆ ಹಾಗೂ ಮುಂಬಡ್ತಿಯನ್ನು ಸ್ಥಗಿತಗೊಳಿಸುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ತಿಳಿಸಿದ್ದರು. ಅದರಂತೆ, ಕ್ರಮ ಕೈಗೊಳ್ಳಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ದಿನಾಂಕ:31.10.2022ರ ಪತ್ರದಲ್ಲಿ ನಿರ್ದೇಶನ ನೀಡಲಾಗಿತ್ತು.<br><br>ಅದರಂತೆ, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ದಿನಾಂಕ:24–01–2023ರಂದು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳ ಬಡ್ತಿಯಲ್ಲಿ ಮೀಸಲಾತಿ ಪಾಲನೆ ಕುರಿತಂತೆ ಅಗತ್ಯ ದಾಖಲೆಗಳೊಂದಿಗೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರಿಗೆ ಮಾಹಿತಿಗಳನ್ನು ಒದಗಿಸಿದ್ದರು. ಸದರಿ ಮಾಹಿತಿಗಳನ್ನು ಪರಿಶೀಲಿಸಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರು ತಪಾಸಣೆ ಕೈಗೊಂಡು ದಿನಾಂಕ:07–07–2023ರಂದು ತನಿಖಾ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ತನಿಖಾ ವರದಿಯಲ್ಲಿ ಉಳಿದ ಮೂಲ ವೃಂದದಲ್ಲಿ 60 ಪರಿಶಿಷ್ಟ ಜಾತಿ, 11 ಪರಿಶಿಷ್ಟ ಪಂಗಡ ಸೇರಿ ಒಟ್ಟು 71 ಅಭ್ಯರ್ಥಿಗಳು ಮತ್ತು ಕಲ್ಯಾಣ ಕರ್ನಾಟಕ ವೃಂದದಲ್ಲಿ 07 ಪರಿಶಿಷ್ಟ ಜಾತಿ ಮತ್ತು 02 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸೇರಿ ಒಟ್ಟು 09 ಬ್ಯಾಕ್‌ಲಾಗ್ ಹುದ್ದೆಗಳನ್ನು ಗಮನಿಸಿದ್ದು, ಸದರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇಲೆ |

| | | |
|---|---|---|
| | | ಗುರುತಿಸಿ ಭರ್ತಿ ಮಾಡಲು ತಿಳಿಸಿರುತ್ತಾರೆ.<br><br>ಮೇಲಿನಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರು ತಪಾಸಣೆ ಕೈಗೊಂಡು ಸಲ್ಲಿಸಿರುವ ವರದಿಯ ಕುರಿತಂತೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರವರು ಸಲ್ಲಿಸಿರುವ ವರದಿಯ ಹಿನ್ನೆಲೆಯಲ್ಲಿ ಈ ಕುರಿತಂತೆ ಚರ್ಚಿಸಲು ದಿನಾಂಕ:13-10-2023ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆರವರ ಅಧ್ಯಕ್ಷತೆಯಲ್ಲಿ ಸಮಾಜ ಕಲ್ಯಾಣ ಇಲಾಖೆ, ಸಿಆಸು ಇಲಾಖೆ(ಸೇವಾ ನಿಯಮಗಳು) ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳ ಸಂಬಂಧಿಸಿದ ಅಧಿಕಾರಿಗಳ ಉಪಸ್ಥಿತಿಯಲ್ಲಿ ಚರ್ಚಿಸಿ ಸದರಿ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ-<br><br>*"ಮಾನ್ಯ ನ್ಯಾಯಾಲಯದ ತೀರ್ಪಿನನ್ವಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿಯನ್ನು ನೀಡುವಾಗ ಮೀಸಲಾತಿ ರೋಸ್ಟರ್ ಬಿಂದುಗಳನ್ನು ಉಲ್ಲಂಘಿಸದಿರುವುದನ್ನು ಸಮಿತಿಯು ಗಮನಿಸಲಾಗಿ, ಪದವಿ ಪೂರ್ವ ಶಿಕ್ಷಣ ಇಲಾಖೆಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿನ ಅಂಶಗಳ ಕುರಿತು ಅಂದರೆ, ಮುಖ್ಯವಾಗಿ ಇಲಾಖಾ ಮುಂಬಡ್ತಿ ಸಮಿತಿ ಸಭೆಗಳ ನಡವಳಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 21 ಎಸ್‌ಬಿಸಿ 1997 ದಿನಾಂಕ:03-02-1999ರನ್ವಯ ನೀಡಲಾಗಿರುವ ಮುಂಬಡ್ತಿಗಳು ಹಾಗೂ ಇದರ ಕುರಿತಾಗಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:207-227/2020ರಲ್ಲಿನ ದಿನಾಂಕ:14-08-2023ರಂದು ನೀಡಿರುವ ತೀರ್ಪಿನನ್ವಯ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ನೀಡಲಾಗಿರುವ ಮುಂಬಡ್ತಿಗಳು ನಿಯಮಾನುಸಾರವಿಲ್ಲವೆಂದು ಕಂಡುಬಂದಲ್ಲಿ ಸಮಾಜ ಕಲ್ಯಾಣ ಇಲಾಖೆಯು ದಿನಾಂಕ:07-07-2023ರಂದು ನೀಡಲಾಗಿರುವ ತನಿಖಾ ವರದಿಯನ್ನು ಪುಷ್ಟೀಕರಿಸುವ ಸೂಕ್ತ ಸರ್ಕಾರದ ಆದೇಶವನ್ನು ಸಕಾರಣಗಳೊಂದಿಗೆ ಒಂದು ವಾರದೊಳಗಾಗಿ ಸಮಿತಿಯ ಮುಂದೆ ಮಂಡಿಸಲು ತಿಳಿಸಲಾಗಿದೆ. ನಿಗದಿತ ಅವಧಿಯೊಳಗೆ ಸೂಕ್ತ ಸರ್ಕಾರದ ಆದೇಶಗಳೊಂದಿಗೆ ವರದಿಯನ್ನು ಸಮಾಜ ಕಲ್ಯಾಣ ಇಲಾಖೆಯು ಸಲ್ಲಿಸದೇ ಇದ್ದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 21 ಎಸ್‌ಬಿಸಿ 1997 ದಿನಾಂಕ:03-02-1999ರನ್ವಯ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರ ವೃಂದದಿಂದ* |

| | | |
|---|---|---|
| | | *ಪ್ರಾಂಶುಪಾಲರ ವೃಂದಕ್ಕೆ ನೀಡಲಾಗಿರುವ ಮುಂಬಡ್ತಿಗಳು ನಿಯಮಾನುಸಾರವಿರುವುದಾಗಿ ಪರಿಗಣಿಸಿ, ಅದರಂತೆ ಮುಂದಿನ ಬಡ್ತಿ ಪ್ರಕ್ರಿಯೆಗಳನ್ನು ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಮಿತಿಯು ನಿರ್ಣಯಿಸಿರುತ್ತದೆ."*<br><br>ಮೇಲಿನ ಸಭೆಯ ಸೂಚನೆಯಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರು ದಿನಾಂಕ:01-12-2023ರಂದು ನೀಡಿರುವ ವರದಿಯ ಹಿನ್ನೆಲೆಯಲ್ಲಿ ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು) ಅಭಿಪ್ರಾಯವನ್ನು ಕೋರಲಾಗಿದೆ.<br><br>ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಮತ್ತು ಖಾಲಿಯಾಗಲಿರುವ ಹುದ್ದೆಗಳಿಗೆ ಶಾಲಾ ಶಿಕ್ಷಣ ಇಲಾಖೆಯ(ಪದವಿ ಪೂರ್ವ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಗೆ ಬಡ್ತಿ ನೀಡುವ ಬಗ್ಗೆ ಪ್ರಸ್ತುತ ಕ್ರಮಕೈಗೊಳ್ಳಲಾಗುತ್ತಿದೆ. |
| ಈ) | ಬಡ್ತಿ ಮೂಲಕ ಎಷ್ಟು ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿದೆ; | ದಿನಾಂಕ:01-02-2024ರಂತೆ ಬಡ್ತಿ ಕೋಟಾದಲ್ಲಿ ಖಾಲಿ ಇರುವ 219 ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ. |
| ಉ) | ಖಾಯಂ ಪ್ರಾಂಶುಪಾಲರು ಇಲ್ಲದೆ ಇರುವುದರಿಂದ ಆಡಳಿತ ನಿರ್ವಹಣೆ ಮತ್ತು ಪರೀಕ್ಷಾ ಕಾರ್ಯಗಳಿಗೆ ತುಂಬಾ ಅಡಚಣೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ.<br><br>ಶಾಲಾ ಶಿಕ್ಷಣ ಇಲಾಖೆ(ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ) ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗೆ ಸದರಿ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರಿಗೆ ಪ್ರಾಚಾರ್ಯರ ಹುದ್ದೆಗೆ ಪ್ರಭಾರದಲ್ಲಿರಿಸುವ ಮೂಲಕ ಆಡಳಿತ ನಿರ್ವಹಣೆ, ಪರೀಕ್ಷಾ ಕಾರ್ಯ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗುತ್ತಿದೆ. |
| ಊ) | ಹಾಗಾದಲ್ಲಿ ಬಡ್ತಿ ಮೂಲಕ ತುಂಬಬೇಕಾದ ಪ್ರಾಂಶುಪಾಲರ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು? | ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಗೆ ಪ್ರಾಂಶುಪಾಲರ ಹುದ್ದೆಗೆ ಶೀಘ್ರದಲ್ಲಿಯೇ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಇಪಿ 50 ಡಿಜಿಡಬ್ಲ್ಯೂ 2024**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.